## 1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು

## ಸಿ.ಸಿಃ 1950/2014

| | | | |
|---|---|---|---|
| ಸಾಕ್ಷಿದಾರರ ಹೆಸರು | | **ಮಹದೇವಯ್ಯ** | ಪ್ರಾಸಾಃ 5 |
| ತಂದೆಯ/ಗಂಡನ ಹೆಸರು | | ಲೇಟ್ ಚನಯ್ಯ | ಚಾಸಾಃ 5 |
| ವಯಸ್ಸು | | 64 ವರ್ಷ | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಹನುಮನಪುರ ಗ್ರಾಮ | ದಿಃ 18/07/2023 |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

1 ನೇ ಆರೋಪಿ ಮತ್ತು ಚಾಸಾ-1 ನನಗೆ ಗೊತ್ತು. ಸುಮಾರು ೯ ವರ್ಷಗಳ ಹಿಂದೆ ಕವಲಂದೆ ಪೊಲೀಸ್ ಠಾಣೆಯಲ್ಲಿ ಚಾಸಾ-1 ರವರು ನಮ್ಮ ಸಮಕ್ಷಮ ಪೊಲೀಸರಿಗೆ ಲಗ್ನ ಪತ್ರಿಕೆಯನ್ನು ನೀಡಿರುತ್ತಾರೆ. ಆ ಸಂಬಂಧ ಬರವಣಿಗೆ ಮಾಡಿಕೊಂಡು ಲಗ್ನ ಪತ್ರಿಕೆಯನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ. ಬೆಳಗ್ಗೆ ೯.00 ಗಂಟೆಯಿಂದ 10.00-11.00 ಗಂಟೆಯವರೆಗೆ ಬರವಣಿಗೆ ಮಾಡಿರುತ್ತಾರೆ. ಸದರಿ ಬರವಣಿಗೆಗೆ ನಾನು ಮತ್ತು ಚಾಸಾ-4 ಸಹಿ ಮಾಡಿರುತ್ತೇವೆ.

ಈಗ ನನಗೆ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯು ಅಮಾನತ್ತು ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು ಸಾಕ್ಷಿಯು ಗುರುತಿಸಿದ ತನ್ನ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಈಗ ನನಗೆ ತೋರಿಸಿದ ಲಗ್ನ ಪತ್ರಿಕೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು ಸಾಕ್ಷಿಯು ಗುರುತಿಸಿದ ತನ್ನ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿನಾಂಕ 05.07.2014 ರಂದು ಪೊಲೀಸರು ನನ್ನ ಹಾಗು ಚಾಸಾ-1 ಮತ್ತು 4 ರವರ ಸಮಕ್ಷಮ ಚಾಸಾ-1 ರವರು ತಮ್ಮ ವಿವಾಹದ ಲಗ್ನ ಪತ್ರಿಕೆ ಮತ್ತು ಫೋಟೋಗಳನ್ನು ಹಾಜರುಪಡಿಸಿದ ಮೇರೆಗೆ ಪೊಲೀಸ್ ಠಾಣಾ ಆವರಣದಲ್ಲಿ ಅಮಾನತ್ತು ಪಂಚನಾಮೆ ಮಾಡಿ ಲಗ್ನ ಪತ್ರಿಕೆ ಮತ್ತು ಫೋಟೋಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿ.

ಈಗ ನನಗೆ ತೋರಿಸಿದ ನಿಪಿ-5 ರಿಂದ 10 ಫೋಟೋಗಳು ಚಾಸಾ-1 ಮತ್ತು 1 ನೇ ಆರೋಪಿಯ ಮದುವೆಯ ಫೋಟೋಗಳಾಗಿರುತ್ತವೆ. ಅಮಾನತ್ತು ಪಂಚನಾಮೆಗೆ ನಾನು ಚಾಸಾ-1 ಮತ್ತು 4 ಸಹಿ ಮಾಡಿರುತ್ತೇವೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎ.ಎಂ.ಎಸ್. ವಕೀಲರಿಂದಃ**

ಚಾಸಾ-1 ರವರು ಪೊಲೀಸ್ ಠಾಣೆಯಲ್ಲಿ ಲಗ್ನ ಪತ್ರಿಕೆ ಮತ್ತು ಫೋಟೋಗಳನ್ನು ಹಾಜರುಪಡಿಸಿದರು ಎಂದು ಸುಳ್ಳು ಹೇಳತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪೊಲೀಸರ ಕೋರಿಕೆಯಂತೆ ರುಜು ಮಾಡಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**